# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:11ನೇ ಡಿಸೆಂಬರ್, 2025**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಸದನ ಸಮಿತಿಗಳ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಅ. ಶ್ರೀ ಪುಟ್ಟಣ್ಣ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

"ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜುಗಳಿಗೆ ಪದೋನ್ನತಿ ಹೊಂದಿದ ಶಿಕ್ಷಕರುಗಳು ಹಾಗೂ 10, 15, 20, 25 ಮತ್ತು 30 ವರ್ಷಗಳ ಕಾಲಬದ್ಧ ವೇತನ ಮುಂಬಡ್ತಿ ಸೌಲಭ್ಯಗಳನ್ನು ಪಡೆದಿರುವ ಶಿಕ್ಷಕರುಗಳ ನಡುವಿನ ವೇತನ ತಾರತಮ್ಯವನ್ನು ಸರಿಪಡಿಸುವ ಕುರಿತು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಅವಧಿಯನ್ನು ದಿನಾಂಕ:02.12.2025ರಿಂದ ಆರು ತಿಂಗಳವರೆಗೆ ವಿಸ್ತರಿಸುವ ಪ್ರಸ್ತಾವನೆಯನ್ನು ಮಂಡಿಸುವುದು.

**ಆ. ಶ್ರೀ ಎಸ್.ವ್ಹಿ. ಸಂಕನೂರ (ಅಧ್ಯಕ್ಷರು, ವಿಶೇಷ ಜಂಟಿ ಸದನ ಸಮಿತಿ) ಅವರು:–**

"ರಾಜ್ಯದಲ್ಲಿ 2020–21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ, ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯ ಅವಧಿಯನ್ನು ದಿನಾಂಕ:14.07.2025ರಿಂದ ಹನ್ನೆರಡು ತಿಂಗಳವರೆಗೆ ವಿಸ್ತರಿಸುವ ಪ್ರಸ್ತಾವನೆಯನ್ನು ಮಂಡಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ರಾಮೋಜಿಗೌಡ** ಅವರುಗಳು ರಾಜ್ಯ ಸರ್ಕಾರ ಇತ್ತೀಚೆಗೆ ಪದವಿ ಪೂರ್ವ ಹಂತಕ್ಕೆ ಸ್ವತಂತ್ರ ಅಸ್ತಿತ್ವಕ್ಕೆ ಧಕ್ಕೆ ಬರುವ ರೀತಿಯಲ್ಲಿ ಹಲವಾರು ಸುತ್ತೋಲೆಗಳನ್ನು ಹೊರಡಿಸುತ್ತಿರುವ ಹಿನ್ನೆಲೆಯಲ್ಲಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಆತಂಕಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

02. **ಶ್ರೀ ಐವನ್ ಡಿ'ಸೋಜಾ** ಅವರು ಕರಾವಳಿ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಇಲಾಖೆ ಕೈಗೊಂಡಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

03. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ರಾಜ್ಯ ಸರ್ಕಾರವು ನಿಜಶರಣ ಅಂಬಿಗರ ಚೌಡಯ್ಯರವರ ಪ್ರತಿಮೆಯನ್ನು ಸ್ಥಾಪಿಸಲು ವಿಳಂಬ ನೀತಿ ಅನುಸರಿಸುತ್ತಿರುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

04. **ಡಾ: ಕೆ. ಗೋವಿಂದರಾಜ್** ಅವರು ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವುದರಿಂದ ಬೆಂಗಳೂರು ಪೊಲೀಸ್ ಕಮಿಷನರೇಟ್‌ನ್ನು ಎರಡು ವಿಭಾಗಗಳನ್ನಾಗಿ ವಿಂಗಡಿಸಿ, ಪ್ರಸ್ತುತ ಇರುವ ಪೊಲೀಸ್ ಆಯುಕ್ತರ ಜೊತೆಗೆ ಮತ್ತೊಂದು ಪೊಲೀಸ್ ಆಯುಕ್ತರ ಹಾಗೂ ಪೊಲೀಸ್ ಅಧಿಕಾರಿ/ಸಿಬ್ಬಂದಿ ಹುದ್ದೆಗಳನ್ನು ಹೊಸದಾಗಿ ಸೃಜಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

05. **ಶ್ರೀ ರಮೇಶ್ ಬಾಬು** ಅವರು ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಪುರಸಭೆ ಮತ್ತು ಹುಳಿಯಾರು ಪಟ್ಟಣ ಪಂಚಾಯಿತಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿದ್ದರೂ ಕಾಮಗಾರಿಗಳನ್ನು ಪೂರ್ಣಗೊಳಿಸದೆ ಹಣ ದುರ್ಬಳಕೆಯಾಗಿರುವ ಬಗ್ಗೆ ಹಾಗೂ ಹುಳಿಯಾರು ಪಟ್ಟಣ ಪಂಚಾಯಿತಿಗೆ ಕಸ ವಿಲೇವಾರಿ ಮಾಡಲು ಸ್ಥಳ ನಿಗದಿಗೊಳಿಸದಿರುವ ಬಗ್ಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

06. **ಡಾ: ಎಂ.ಜಿ. ಮುಳೆ** ಅವರು ಬಸವಕಲ್ಯಾಣದಲ್ಲಿರುವ ಐತಿಹಾಸಿಕ ಸ್ಮಾರಕಗಳ ನಿರ್ವಹಣೆ ಮತ್ತು ಉದ್ಯಾನವನಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

07. **ಶ್ರೀ ಮಂಜುನಾಥ್ ಭಂಡಾರಿ** ಅವರು ಉಡುಪಿ ಜಿಲ್ಲೆಯ ರೈತರ ಹಿತದೃಷ್ಠಿಯಿಂದ ವಾರಾಹಿ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

08. **ಶ್ರೀ ಪ್ರಕಾಶ್ ಬಾಬಾಣ್ಣ ಹುಕ್ಕೇರಿ** ಅವರು ಮಾನ್ಯ ಉಚ್ಛ ನ್ಯಾಯಾಲಯದ ಆದೇಶದಿಂದ ಬಾಧಿತರಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಾನ್ ಯು.ಜಿ.ಸಿ ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆ ಕಲ್ಪಿಸಲು ಕಾನೂನು ರೂಪಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

01. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಶ್ರೀ ಪಿ.ಹೆಚ್. ಪೂಜಾರ್** ಅವರುಗಳು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ವಸತಿ ಹಾಗೂ ಜಮೀನುಗಳನ್ನು ಕಳೆದುಕೊಂಡ ರೈತರಿಗೆ ಪುನರ್ ವಸತಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಉಪ ಮುಖ್ಯಮಂತ್ರಿಗಳು)

೦೨. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ ಮತ್ತು ಎಸ್.ವ್ಹಿ. ಸಂಕನೂರ, ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) ಹಾಗೂ ರಾಮೋಜಿಗೌಡ** ಅವರುಗಳು ಸರ್ಕಾರಿ ಶಾಲೆ/ಅನುದಾನಿತ/ಅನುದಾನ ರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು ಕಾಲಕಾಲಕ್ಕೆ ಸಿಗಬೇಕಾದ ಬಡ್ತಿಯಿಂದ ವಂಚಿತರಾಗಿರುವುದನ್ನೊಳಗೊಂಡಂತೆ ಇನ್ನಿತರೆ ಸೌಲಭ್ಯಗಳು ದೊರಕದೆ ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು)

೦೩. **ಶ್ರೀ ಬಿ.ಜಿ. ಪಾಟೀಲ್** ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಾರಂಪರಿಕ ವೈದ್ಯ ಪದ್ಧತಿಯನ್ನು ಬಳಸಿ ಕಾಯಿಲೆಗಳನ್ನು ಗುಣಪಡಿಸುವವರ ಮಕ್ಕಳಿಗೆ ಬಿ.ಎ.ಎಂ.ಎಸ್ ವಿದ್ಯಾಭ್ಯಾಸದಲ್ಲಿ ಶೇ.2ರಷ್ಟು ಮೀಸಲಾತಿ ಕಲ್ಪಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು)

೦೪. **ಶ್ರೀ ಕೇಶವ ಪ್ರಸಾದ್ ಎಸ್.** ಅವರು ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಪರಂಪರಾಗತ ನೇಕಾರಿಕೆಯೊಡನೆ ಆಧುನಿಕ ವಿದ್ಯುತ್ ಚಾಲಿತ ಮಗ್ಗಗಳು ಚಾಲನೆಯಲಿದ್ದು, ನೇಕಾರರ ಬದುಕು ಹಾಗೂ ಅವರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರೋಪಾಯಗಳ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು)

೦೫. **ಡಾ: ತಳವಾರ್ ಸಾಬಣ್ಣ** ಅವರು ನ್ಯಾ. ಬಚಾವತ್ ಆಯೋಗದ ತೀರ್ಪಿನ ರೀತ್ಯಾ, ಕಲಬುರಗಿ, ವಿಜಯಪುರ ಹಾಗೂ ಯಾದಗಿರಿ ಜಿಲ್ಲೆಯ ಜನರು ಭೀಮಾ ನದಿಯ 15 ಟಿಎಂಸಿ ನೀರನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲು ಅನುವಾಗುವಂತೆ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಉಪ ಮುಖ್ಯಮಂತ್ರಿಗಳು)

೦೬. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ನಗರದ ಸುತ್ತಮುತ್ತಲಿನ ಪರಿಸರ ಮತ್ತು ಜನ-ಜಾನುವಾರುಗಳ ಹಿತದೃಷ್ಠಿಯಿಂದ ಬಲ್ದೋಟಾ ಸಮೂಹದ ಹೊಸ ಇಂಟಿಗ್ರೇಟೆಡ್ ಸ್ಟೀಲ್ ಪ್ಲಾಂಟ್ ಕಾರ್ಖಾನೆಯ ತೆರೆಯುವಿಕೆಯನ್ನು ನಿರ್ಬಂಧಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ

**ಶ್ರೀಯುತರುಗಳಾದ:**

| | |
|---|---|
| **ಮಾನ್ಯ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ. ಹಾಗೂ ಇತರರು** | ರಾಜ್ಯದಲ್ಲಿ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿಪಡಿಸುವುದು ಹಾಗೂ ನಾಶಗೊಂಡ ಬೆಳೆಗಳಿಗೆ ಪರಿಹಾರ ಒದಗಿಸುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ವಿಷಯದ ಕುರಿತು |

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ಬಿ.ಪಿ.ಎಲ್ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಣೆ ಮತ್ತು ಮಾರಾಟ ಮಾಡಿರುವ ಪ್ರಕರಣಗಳ ಬಗ್ಗೆ ದಿನಾಂಕ:08.12.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:01(14)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಸಿ.ಟಿ. ರವಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಗರ್ಭಿಣಿ ಸ್ತ್ರೀಯರಿಗೆ ಹೆರಿಗೆಯ ಸಂದರ್ಭದಲ್ಲಿ ನೋವು ನಿವಾರಕ ಔಷಧಿ ನೀಡುವ ಬಗ್ಗೆ ದಿನಾಂಕ:08.12.2025ರ ಚುಕ್ಕೆ ರಹಿತ **ಪ್ರಶ್ನೆ ಸಂಖ್ಯೆ:95(03)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ರಮೇಶ್ ಬಾಬು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**